# ಕರ್ನಾಟಕ ವಿಧಾನ ಪರಿಷತ್ತು

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ವೈ.ಎಂ. ಸತೀಶ್ ರವರು ನಿಯಮ-72 ರ ಮೇರೆಗೆ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಉತ್ತರ.**

**ವಿಷಯ: ವಿಜಯನಗರ ಜಿಲ್ಲೆ ವ್ಯಾಪ್ತಿಯ ಗ್ರಾಮ ಪಂಚಾಯಿತಿಗಳಲ್ಲಿ ಸ್ಥಾಪಸಿರುವ ಗ್ರಂಥಾಲಯಗಳಿಗೆ ಕಳೆದ ಒಂದು ವರ್ಷದಿಂದ ಮೇಲ್ವಿಚಾರಕರ ಹುದ್ದೆಗೆ ನೇಮಕವಾಗದೆ ವಿಳಂಬವಾಗಿರುವ ಬಗ್ಗೆ.**

*****

**ಉತ್ತರ:** ಗ್ರಾಮ ಪಂಚಾಯಿತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳ ಮೇಲ್ವಿಚಾರಕರಿಗೆ ಸಂಬಂಧಿಸಿದಂತೆ ಸರ್ಕಾರದ ಅಧಿಸೂಚನೆ ಸಂಖ್ಯೆ:RDPR/156/GPA/2022, ದಿನಾಂಕ:14.11.2022ರಂದು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್(ಗ್ರಾಮ ಪಂಚಾಯಿತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳ ಮೇಲ್ವಿಚಾರಕರ ಸೇವಾ) ನಿಯಮಗಳು, 2022ನ್ನು ರಚಿಸಲಾಗಿದ್ದು, ಈ ನಿಯಮಗಳಲ್ಲಿ ಗ್ರಂಥಾಲಯ ಮೇಲ್ವಿಚಾರಕರ ನೇಮಕಾತಿ ವಿಧಾನ, ಆಯ್ಕೆ ಸಮಿತಿ, ವಿದ್ಯಾರ್ಹತೆ, ಖಾಲಿ ಹುದ್ದೆಗಳನ್ನು ಗುರುತಿಸುವುದು, ನೇಮಕಾತಿಯಲ್ಲಿ ಮೀಸಲಾತಿ, ಅರ್ಜಿಗಳನ್ನು ಅಹ್ವಾನಿಸುವುದು, ಅರ್ಜಿಗಳ ಪರಿಶೀಲನೆ, ಆಯ್ಕೆ ವಿಧಾನ, ಆಯ್ಕೆಯಾದ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡುವುದು, ಸೇವಾ ಷರತ್ತುಗಳು ಮತ್ತು ಮೇಲ್ವಿಚಾರಕರ ಕರ್ತವ್ಯಗಳನ್ನು ನಿರ್ದಿಷ್ಟಪಡಿಸಲಾಗಿದೆ.

ವಿಜಯನಗರ ಜಿಲ್ಲಾ ಪಂಚಾಯಿತಿ ವ್ಯಾಪ್ತಿಯ 22 ಗ್ರಾಮ ಪಂಚಾಯಿತಿ ಗ್ರಂಥಾಲಯ ಮೇಲ್ವಿಚಾರಕರ ಖಾಲಿ ಹುದ್ದೆಗಳ ನೇಮಕಾತಿಗೆ ದಿನಾಂಕ:16.12.2023 ರಂದು ಅಧಿಸೂಚನೆ ಹೊರಡಿಸಲಾಗಿರುತ್ತದೆ. ದಿನಾಂಕ:18.12.2023 ರಿಂದ 08.01.2024ರ ವರೆಗೆ ಅರ್ಜಿ ಸಲ್ಲಿಸಲು ಅಭ್ಯರ್ಥಿಗಳಿಗೆ ಅವಕಾಶ ನೀಡಲಾಗಿರುತ್ತದೆ.

ವಿಜಯನಗರ ಜಿಲ್ಲಾ ಪಂಚಾಯಿತಿ ವ್ಯಾಪ್ತಿಗೆ ಸಲ್ಲಿಕೆಯಾದ ಅರ್ಜಿಗಳನ್ನು ಪರಿಶೀಲಿಸಿದಾಗ ಅಭ್ಯರ್ಥಿಗಳು Certification Course in Library Science ನಲ್ಲಿ ಹೊರ ರಾಜ್ಯದಿಂದ ಪಡೆದ ಪ್ರಮಾಣ ಪತ್ರಗಳನ್ನು ಸಲ್ಲಿಸಿರುವುದು ಕಂಡು ಬಂದಿರುತ್ತದೆ. ಆದ್ದರಿಂದ ದಿನಾಂಕ.28.02.2024ರಂದು ಪತ್ರದ ಮೂಲಕ ಗ್ರಂಥಾಲಯ ಮೇಲ್ವಿಚಾರಕರ ಹುದ್ದೆಗೆ ಅರ್ಹ ಅಭ್ಯರ್ಥಿಗಳನ್ನು ಆಯ್ಕೆ ಮಾಡಲು ಕೆಲವು ವಿಷಯಗಳ ಕುರಿತು ಸರ್ಕಾರದಿಂದ ಸ್ಪಷ್ಟೀಕರಣ ಕೋರಿರುತ್ತಾರೆ.

ಅಭ್ಯರ್ಥಿಗಳು ಹೊರ ರಾಜ್ಯಗಳ ಸಂಸ್ಥೆಗಳಲ್ಲಿ Certification Course in Library Science ತರಬೇತಿ ಪೂರ್ಣಗೊಳಿಸಿದ್ದಲ್ಲಿ ಸದರಿ ಸಂಸ್ಥೆಯು ಸರ್ಕಾರದಿಂದ ಮಾನ್ಯತೆ ಪಡೆದಿದೆ ಅಥವಾ ಪಡೆದಿಲ್ಲ ಎಂಬುದರ ಕುರಿತು ಪರಿಶೀಲಿಸಿ ಮಾನ್ಯತೆ ಪಡೆದಿದ್ದಲ್ಲಿ ಪರಿಗಣಿಸಬಹುದಾಗಿದೆ. ಪ್ರಮಾಣ ಪತ್ರಗಳನ್ನು ಪರಿಶೀಲಿಸಿ ದೃಢೀಕರಿಸುವಂತೆ ಸಂಬಂಧಪಟ್ಟ ಸಂಸ್ಥೆಗೆ ಪತ್ರ ಬರೆಯುವುದು ಮತ್ತು ಸಂಸ್ಥೆಗಳಿಂದ ದೃಢೀಕರಣ ಸ್ವೀಕೃತವಾಗದ ಅರ್ಜಿಗಳನ್ನು ಪರಿಗಣಿಸತಕ್ಕದ್ದಲ್ಲ. ಮೇಲ್ಕಂಡ ನಿಯಮಗಳ, ನಿಯಮ 13(3) ರಲ್ಲಿ, ತಾತ್ಕಾಲಿಕ ಆಯ್ಕೆ ಪಟ್ಟಿಗೆ ಸಂಬಂಧಿಸಿದಂತೆ, ಆಕ್ಷೇಪಣೆ /ಸಲಹೆಗಾಗಿ ಹದಿನೈದು ದಿನಗಳ ಕಾಲಾವಕಾಶವನ್ನು ನೀಡತಕ್ಕದ್ದು, ಆಕ್ಷೇಪಣೆ/ಸಲಹೆಗಳನ್ನು ಪರಿಶೀಲಿಸಿ ಅಂತಿಮ ಆಯ್ಕೆ ಪಟ್ಟಿಯನ್ನು ಪ್ರಕಟಿಸತಕ್ಕದ್ದು ಎಂದು ದಿನಾಂಕ:07.08.2024 ರಂದು ಆಯುಕ್ತರು, ಪಂಚಾಯತ್ ರಾಜ್ ರವರು ಸ್ಪಷ್ಟೀಕರಣ ನೀಡಿರುತ್ತಾರೆ.

ದಿನಾಂಕ:02.09.2024 ರಂದು ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಪ್ರಕಟಿಸಲಾಗಿರುತ್ತದೆ. 22 ಗ್ರಾಮ ಪಂಚಾಯಿತಿ ಗ್ರಂಥಾಲಯಗಳ ಪೈಕಿ 09 ಗ್ರಾಮ ಪಂಚಾಯಿತಿ ಗ್ರಂಥಾಲಯಗಳಿಗೆ ಸಂಬಂಧಿಸಿದಂತೆ Certification Course in Library Science ಆಧಾರದ ಮೇಲೆ ಅರ್ಜಿಗಳನ್ನು ಪರಿಗಣಿಸಬೇಕಾಗಿದ್ದು, ಸಂಬಂಧಪಟ್ಟ ಎಲ್ಲಾ ಸಂಸ್ಥೆಗಳಿಗೆ ಪತ್ರ ವ್ಯವಹರಿಸಲಾಗಿರುತ್ತದೆ. 09 ಸಂಸ್ಥೆಗಳ ಪೈಕಿ 07 ಸಂಸ್ಥೆಗಳಿಂದ ಉತ್ತರ ಸ್ವೀಕೃತವಾಗಿದ್ದು, ಇನ್ನೆರಡು ಸಂಸ್ಥೆಗಳಾದ Lingaya'sLalita Devi Institute of Management & Sciences, New Delhi ಮತ್ತು Annamalai University, Tamil Nadu ಗಳಿಂದ ಉತ್ತರ ಸ್ವೀಕೃತಿಯಾಗಿರುವುದಿಲ್ಲ. ಈ ಸಂಸ್ಥೆಗಳಿಗೆ ನೆನಪೋಲೆ ಪತ್ರಗಳನ್ನು ರವಾನಿಸಲಾಗಿದ್ದು, ಉತ್ತರ ಸಲ್ಲಿಕೆಯಾದ ಕೂಡಲೇ ನಿಯಮಾನುಸಾರ ನೇಮಕಾತಿಗೆ ಕ್ರಮ ವಹಿಸಲಾಗುವುದು.

**ಸಂಖ್ಯೆ: ಗ್ರಾಅಪ 724 ಗ್ರಾಪಂಅ 2024**

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.